ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ. ರವರ ನ್ಯಾಯಾಲಯ,
ಚಿಕ್ಕನಾಯಕನಹಳ್ಳಿ

ಸಿ.ಸಿ. ನಂ. **4213/2022** ಫ್ರಾ.ಸಾ -- 2
ಚಾ.ಸಾ – 1

ದಿಃ **29-04-2024** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

| | | |
|---|---|---|
| ಸಾಕ್ಷಿಯ ಹೆಸರು | : | ಗೋವಿಂದಸ್ವಾಮಿ |
| ತಂದೆ ಹೆಸರು | : | ಚನ್ನಪ್ಪ |
| ವಯಸ್ಸು | : | 35 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸ ಸ್ಥಳ | : | ಅಂಕಸಂದ್ರ, ಚಿಕ್ಕನಾಯಕನಹಳ್ಳಿ |

ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ-

ಈ ಪ್ರಕರಣದ ಬಗ್ಗೆ ನನಗೆ ಏನೂ ಗೊತ್ತಿಲ್ಲ, ಆರೋಪಿ ಗೊತ್ತು. ನನ್ನ ಸಮಕ್ಷಮ ಯಾವುದೇ ಪಂಚನಾಮೆ ಕ್ರಮವನ್ನು ಜರುಗಿಸಿರುವುದಿಲ್ಲ ಸದರಿ ಪಂಚನಾಮೆಗೆ ಪೊಲೀಸರು ಯಾವುದೇ ವಸ್ತುವನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ. ಪಂಚನಾಮೆಯಲ್ಲಿ ಬರೆದಿರುವ ವಿಷಯ ನನಗೆ ಗೊತ್ತಿಲ್ಲ. ಪೊಲೀಸರ ಕೋರಿಕೆಯ ಮೇರೆಗೆ ನನ್ನ ಸಹಿಯನ್ನು ಮಾಡಿರುತ್ತೇನೆ. ಸಾಕ್ಷಿಯು ನಿಪಿ-1 ರಲ್ಲಿರುವ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಈ ಬಗ್ಗೆ ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆಯನ್ನು ಕೊಟ್ಟಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ತನ್ನ ಹೇಳಿಕೆಗೆ ಪ್ರತಿಕೂಲವಾಗಿ ಸಾಕ್ಷ್ಯ ನುಡಿಯುತ್ತಿರುವುದರಿಂದ ಮಾನ್ಯ ಎಪಿಪಿರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ನೀಡಲಾಯಿತು)

ಪಾಟೀ ಸವಾಲು ಮಾನ್ಯ ಎಪಿಪಿ ರವರಿಂದಃ-

ದಿನಾಂಕ:- 27-04-2022 ರಂದು ಸಂಜೆ 5-30 ಗಂಟೆ ಸಮಯದಲ್ಲಿ ಚಿಕ್ಕನಾಯಕನಹಳ್ಳಿ ತಾಲೂಕು, ಹಂದನಕೆರೆ ಹೋಬಳಿ, ಅಂಕಸಂದ್ರ ಗ್ರಾಮದ ಆರೋಪಿಯ ಮನೆಯ ಮುಂಭಾಗ ನನ್ನ ಮತ್ತು ಚಾಸಾ-2 ರಿಂದ 4 ರವರ ಸಮಕ್ಷಮ ಪಂಚನಾಮೆ ಕ್ರಮ ಜರುಗಿಸಿದರು ಎಂದರೆ ಸರಿಯಲ್ಲ ಸದರಿ ಪಂಚನಾಮೆಯಲ್ಲಿ 90 ಮಿಲಿಯ 96 - hayward whisky tetra packets ಗಳು, 108 ಎಂ.ಎಲ್ ನ - 6 B.P whisky tetra packets ಗಳು ಮತ್ತು ಹಳದಿ ಬಣ್ಣದ ಒಂದು ಪ್ಲಾಸ್ಟಿಕ್ ಚೀಲವನ್ನು ಪೊಲೀಸರು ತಮ್ಮ ವಶಕ್ಕೆ ಪಡೆದರು ಎಂದರೆ ಸರಿಯಲ್ಲ. ಸಾಕ್ಷಿಯು ನ್ಯಾಯಾಲಯದ

**CC. No. 4213/22** **PW – 2**

ಮುಂದಿರುವ M.O-1 ರಿಂದ 3 ನ್ನು ಗುರುತಿಸಲು ನಿರಾಕರಿಸಿರುತ್ತಾರೆ. ಸದರಿ ಟೆಟ್ರಾ ಪ್ಯಾಕೇಟ್ ಗಳಲ್ಲಿ 90 ಮಿಲಿಯ 30 whisky tetra packets ಗಳು ಮತ್ತು 180 ಎಂ.ಎಲ್ ನ 6 B.P whisky tetra packets ಗಳನ್ನು ರಾಸಾಯನಿಕ ಪರೀಕ್ಷೆಗೆ ಕಳುಹಿಸುವ ಸಲುವಾಗಿ ಪ್ರತ್ಯೇಕವಾಗಿ ತೆಗೆದು ಒಂದು ಬಿಳಿಯ ಬಟ್ಟೆಯ ಚೀಲದಲ್ಲಿ ಹಾಕಿ ಬಾಯಿಯನ್ನು ದಾರದ ಸಹಾಯದಿಂದ ಕಟ್ಟಿ ಸದರಿ ಚೀಲದ ಬಾಯಿಗೆ ಅರಗು ಮತ್ತು ಇಲಾಖಾ ಸೀಲ್ ನಂಬರ್ "153" ರಿಂದ ಸೀಲ್ ಮಾಡಿ ನಂತರ ಪಂಚರ ಸಹಿಯನ್ನು ಪಡೆದು ಸದರಿ ಚೀಲಕ್ಕೆ ಅಂಟಿಸಿದರು ಎಂದರೆ ಸರಿಯಲ್ಲ. ಸದರಿ ಪಂಚನಾಮೆ ಸ್ಥಳಕ್ಕೆ ಚೆಕ್ಕುಬಂದಿ ಪೂರ್ವಕ್ಕೆ : ಸಿದ್ಧಯ್ಯನವರ ಜಮೀನು, ಪಶ್ಚಿಮಕ್ಕೆ : ರಾಮಚಂದ್ರಯ್ಯನವರ ಜಮೀನು, ಉತ್ತರಕ್ಕೆ : ಆರೋಪಿಗೆ ಸೇರಿದ ಜಮೀನು, ದಕ್ಷಿಣಕ್ಕೆ : ಆರೋಪಿಗೆ ಸೇರಿದ ಜಮೀನು ಇರುತ್ತದೆ ಎಂದರೆ ಸರಿಯಲ್ಲ. ಪ್ರಕರಣದ ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ದಿನಾಂಕ:- 06-08-2022 ರಂದು ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ಮುಂದೆ ನನ್ನ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಗೆ ಹೇಳಿಕೆಯ ಪೂರ್ಣ ಭಾಗವನ್ನು ಓದಿ ಹೇಳಿದ್ದು ಸಾಕ್ಷಿಯು ಹೇಳಿಕೆಯ ಪೂರ್ಣ ಭಾಗವನ್ನು ನಿರಾಕರಿಸಿರುತ್ತಾರೆ. ನಿರಾಕರಿಸಿದ ಹೇಳಿಕೆಯ ಭಾಗವನ್ನು ನಿಪಿ-3 ಎಂದು ಗುರುತಿಸಲಾಯಿತು.

<u>ಪಾಟೀ ಸವಾಲು : ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.</u>

<u>ಮರು ವಿಚಾರಣೆ - ಇಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚಿಸಿದೆ)

ಸಹಿ/-
ಪ್ರಧಾನ ಸಿವಿಲ್ ನ್ಯಾಯಾಧೀಶರು, ಚಿ.ನಾ.ಹಳ್ಳಿ